ಆ) ಹಾಗಿದ್ದಲ್ಲಿ, ಈ ಹುದ್ದೆಗಳನ್ನು ಭರ್ತಿ ಮಾಡಿಕೊಳ್ಳಲು ಅನುಕೂಲವಾಗುವಂತೆ ನಿರ್ಬಂಧವನ್ನು ಯಾವಾಗ ತೆಗೆಯಲಾಗುವುದು?

ಶ್ರೀ ಎಸ್.ಎಂ. ಯಾಹ್ಯಾ (ಉನ್ನತ ಶಿಕ್ಷಣ ಸಚಿವರು) :

ಅ) ಹೌದು

ಆ) ಸರ್ಕಾರಿ ಕಾಲೇಜುಗಳಲ್ಲಿನ ಬೋಧಕೇತರ ಸಿಬ್ಬಂದಿ ಹುದ್ದೆಗಳನ್ನು ಭರ್ತಿ ಮಾಡಿಕೊಳ್ಳಲು ಸದ್ಯಕ್ಕೆ ಸರ್ಕಾರವು ಉದ್ದೇಶಿಸಿರುವುದಿಲ್ಲ.

ಪ್ರಥಮ ದರ್ಜೆಯ ಕಾಲೇಜುಗಳಿಗೆ ಸ್ವಂತ ಕಟ್ಟಡಗಳು

372 - ಶ್ರೀ ಎ. ರುಕ್ಮಯ ಪೂಜಾರಿ (ವಿಟ್ಲ) : ಮಾನ್ಯ ಉನ್ನತ ಶಿಕ್ಷಣ ಮತ್ತು ವಕ್ಫ್ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) 1993-94ನೇ ಸಾಲಿನಲ್ಲಿ ರಾಜ್ಯದಲ್ಲಿ ಎಷ್ಟು ಪ್ರಥಮ ದರ್ಜೆ ಕಾಲೇಜುಗಳನ್ನು ಪ್ರಾರಂಭಿಸಲಾಗಿದೆ? ಇವುಗಳಿಗೆ ಸ್ವಂತ ಕಟ್ಟಡಗಳನ್ನು ಒದಗಿಸಲಾಗಿದೆಯೇ?

ಆ) ವಿಟ್ಲ ಪ್ರಥಮ ದರ್ಜೆ ಕಾಲೇಜಿಗೆ ಸ್ವಂತ ಕಟ್ಟಡ ಇಲ್ಲದೇ ಇರುವುದರಿಂದ ವಿದ್ಯಾರ್ಥಿಗಳಿಗೆ ತೊಂದರೆಗಳಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಇ) ಬಂದಿದ್ದರೆ ಸರ್ಕಾರದವರು ಕೈಗೊಂಡ ಕ್ರಮಗಳೇನು?

ಶ್ರೀ ಎಸ್.ಎಂ. ಯಾಹ್ಯಾ (ಉನ್ನತ ಶಿಕ್ಷಣ ಮತ್ತು ವಕ್ಫ್ ಸಚಿವರು) :

ಅ) 1993-94ರಲ್ಲಿ ಪ್ರಾರಂಭಿಸಲಾದ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳು 7. ಇವುಗಳಿಗೊಂದಕ್ಕೂ ಸ್ವಂತ ಕಟ್ಟಡ ಒದಗಿಸಿರುವುದಿಲ್ಲ.

ಆ) ಹೌದು

ಇ) ಆಯವ್ಯಯದ ಕೊರತೆ ಇರುವ ಕಾರಣ ಈ ವರ್ಷ ಇದನ್ನು ತೆಗೆದುಕೊಂಡಿರುವುದಿಲ್ಲ. ಆರ್ಥಿಕ ಅನುಕೂಲತೆಗನುಗುಣವಾಗಿ ಬರುವ ವರ್ಷಗಳಲ್ಲಿ ಈ ಕಾಮಗಾರಿ ಕೈಗೊಳ್ಳುವ ಸಾಧ್ಯಾಸಾಧ್ಯತೆ ಬಗ್ಗೆ ಪರಿಶೀಲಿಸಲಾಗುವುದು.

ಆನೆಗಳ ಹಾವಳಿ

568 - ಪ್ರೊ ಎಂ.ಡಿ. ನಂಜುಂಡಸ್ವಾಮಿ (ಧಾರವಾಡ ಗ್ರಾಮಾಂತರ) : ಮಾನ್ಯ ಅರಣ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಸತತವಾಗಿ ಹೆಚ್ಚುತ್ತಿರುವ ಆನೆಗಳ ಹಾವಳಿಗಳ ಬಗ್ಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು?

ಆ) ಆನೆಗಳಿಂದ ಬೆಳೆ ಹಾನಿ ಹಾಗೂ ಪ್ರಾಣ ಹಾನಿಗೆ ಸಂಬಂಧಿಸಿದಂತೆ ಸರ್ಕಾರದ ಪ್ರಸಕ್ತ ನೀತಿಯೇನು?

ಶ್ರೀ ಹೆಚ್. ವಿಶ್ವನಾಥ್ (ಅರಣ್ಯ ಸಚಿವರು) :

ಅ) ಕಾಡಾನೆಗಳ ಹಾವಳಿಯನ್ನು ತಪ್ಪಿಸಲು, ಈ ಕೆಳಕಂಡ ಕ್ರಮಗಳನ್ನು ಕೈಗೊಳ್ಳಲಾಗಿದೆ :

1) ಆಯಕಟ್ಟಿನ ಸ್ಥಳಗಳಲ್ಲಿ ಆನೆ ನಿರೋಧಕ ಕಂದಕಗಳನ್ನು ನಿರ್ಮಿಸಲಾಗಿದೆ.
2) ಹಾವಳಿ ವರದಿ ಬಂದ ತಕ್ಷಣ, ತಮಟೆ ಭಾರಿಸಿ, ಪಟಾಕಿ ಸಿಡಿಸಿ, ಕಾಡಿನೊಳಕ್ಕೆ ಅಟ್ಟಲು ಕ್ರಮ ಕೈಗೊಳ್ಳಲಾಗುತ್ತಿದೆ.
3) ಸ್ಥಳೀಯ ಜನರ ಸಹಾಯ ಪಡೆಯುವುದಲ್ಲದೇ ದಿನಗೂಲಿಯ ಮೇಲೆ ಹೆಚ್ಚುವರಿ ಸಿಬ್ಬಂದಿಯನ್ನು ನೇಮಿಸಿಕೊಂಡು, ಆನೆ ಹಾವಳಿ ತಡೆಯಲು